# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 104 |
| 2. | ಮಾನ್ಯ ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | : | 04.03.2025 |
| 4. | ಉತ್ತರಿಸುವ ಸಚಿವರು | : | ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹಿತಕಾಯಲು ಕೈಗೊಂಡ ಕ್ರಮಗಳೇನು; | ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹಿತಕಾಯಲು ಮತ್ತು ಸಕ್ಕರೆ ಕಾರ್ಖಾನೆಗಳಲ್ಲಿ ತೂಕದಲ್ಲಿ ಆಗುವ ಮೋಸ ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ. |
| (ಆ) | ಸಕ್ಕರೆ ಕಾರ್ಖಾನೆಗಳಲ್ಲಿ ತೂಕದಲ್ಲಿ ಆಗುವ ಮೋಸ ತಡೆಗಟ್ಟಲು ಕ್ರಮ ಕೈಗೊಳ್ಳಲಾಗಿದೆಯೇ? | 1) ಕಳೆದ 03 ವರ್ಷಗಳಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳು ರೈತರಿಗೆ ಪಾವತಿಸಬೇಕಾಗಿದ್ದ ಕಬ್ಬು ಬಿಲ್ಲನ್ನು ಕೇಂದ್ರ ಸರ್ಕಾರವು ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆ (FRP) ಯಂತೆ ಪೂರ್ಣವಾಗಿ ಪಾವತಿಸಲು ಸರ್ಕಾರವು ಕ್ರಮಕೈಗೊಂಡಿರುತ್ತದೆ.<br>2) ಆರ್ಥಿಕ ಸಂಕಷ್ಟ ಮತ್ತು ಇತರೆ ಕಾರಣಗಳಿಂದ ಸ್ಥಗಿತಗೊಂಡಿದ್ದ ರೈತರ ಸಹಕಾರಿ ಸಕ್ಕರೆ ಕಾರ್ಖಾನೆಯನ್ನು ಮೆ.ಬೀಳಗಿ ಶುಗರ್ ಮಿಲ್ ಲಿ.,ಬಾಡಗಂಡಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರಿಗೆ ಎಲ್.ಆರ್.ಓ.ಟಿ ಆಧಾರದ ಮೇಲೆ ಗುತ್ತಿಗೆ ನೀಡುವುದರ ಮೂಲಕ ಪುನಶ್ಚೇತನಗೊಳಿಸಲಾಗಿದೆ.<br>3) ಕಬ್ಬು ಬೆಳೆಗಾರರ ಹಿತವನ್ನು ಗಮನದಲ್ಲಿಟ್ಟುಕೊಂಡು ಕಬ್ಬು ಕಟಾವು ಮತ್ತು ಸಾಗಾಣಿಕ ವೆಚ್ಚದ ಮಾರ್ಗಸೂಚಿಗಳನ್ನು ಕಬ್ಬು ನಿಯಂತ್ರಣ ಮಂಡಳಿಯ ಅನುಮೋದನೆ ಪಡೆದು ಹೊರಡಿಸಲಾಗಿದೆ. ಸದರಿ ಮಾರ್ಗಸೂಚಿಗಳನ್ನು ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆಗಳು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಸೂಚಿಸಲಾಗಿದೆ.<br>4) ಸಕ್ಕರೆ ಕಾರ್ಖಾನೆಗಳು ಉಪಯೋಗಿಸುತ್ತಿರುವ ವಾಹನ ತೂಕದ ಸಾಧನಗಳಲ್ಲಿ ರೈತರಿಗೆ ಆಗುವ ತೂಕದಲ್ಲಿ ಆಗುತ್ತಿರುವ ಮೋಸವನ್ನು ತಡೆಗಟ್ಟಲು (ವೇ-ಬ್ರಿಡ್ಜ್) ಕಾನೂನು ಮಾಪನ ಶಾಸ್ತ್ರ ಇಲಾಖೆಯಿಂದ ಅನುಸರಿಸಬೇಕಾದ ಮಾದರಿ ಕಾರ್ಯಸೂಚಿ ವಿಧಾನಗಳನ್ನು ಸರ್ಕಾರ ಆದೇಶ ಸಂಖ್ಯೆ: ಆನಾಸ/126/ಕಮಾಸೇ/2023 ದಿನಾಂಕ:27.11.2023 ರನ್ವಯ ಹೊರಡಿಸಲಾಗಿದೆ.<br>5) ಸದರಿ ಕಾರ್ಯಸೂಚಿಗಳ ವಿಧಾನಗಳನ್ನು ಎಲ್ಲಾ ಸಕ್ಕರೆ ಕಾರ್ಖಾನೆಗಳನ್ನು ತಪ್ಪದೇ ಕಟ್ಟುನಿಟ್ಟಾಗಿ ಪಾಲಿಸಲು ಸೂಚನೆಗಳನ್ನು ನೀಡಲಾಗಿರುತ್ತದೆ. ಅದರಂತೆ, ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವ ಕಾರ್ಯವನ್ನು ನಿರ್ವಹಿಸುವ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ತಂಡವು ಸಕ್ಕರೆ ಕಾರ್ಖಾನೆಗಳಿಗೆ ಭೇಟಿ ನೀಡಿ ಕಬ್ಬಿನ ತೂಕದ ಯಂತ್ರಗಳ ನಿಖರತೆಯನ್ನು ಪರಿಶೀಲಿಸಿ ವರದಿಯನ್ನು ಸಲ್ಲಿಸುವಂತೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಸೂಚನೆಯನ್ನು ನೀಡಲಾಗಿದೆ. |

....2

| | | |
|---|---|---|
| | | 6) ಒಟ್ಟು 79 ಸಕ್ಕರೆ ಕಾರ್ಖಾನೆಗಳ ಪೈಕಿ 73 ಸಕ್ಕರೆ ಕಾರ್ಖಾನೆಗಳು ಅನಲಾಗ್ ಲೋಡ್‌ಸೆಲ್‌ನಿಂದ ಡಿಜಿಟಲ್ ಲೋಡ್‌ಸೆಲ್‌ಗಳನ್ನು ಅಳವಡಿಸಿಕೊಂಡಿರುತ್ತವೆ.<br>7) ರಾಜ್ಯದಲ್ಲಿ ಕಬ್ಬು ಬೆಳೆಗಾರರ ಹಿತಕಾಯಲು ಮತ್ತು ತೂಕದಲ್ಲಾಗುವ ಮೋಸ ತಡೆಗಟ್ಟಲು ಎಲ್ಲಾ ಸಕ್ಕರೆ ಕಾರ್ಖಾನೆಗಳ ಬಳಿ ವೇ-ಬ್ರಿಡ್ಜ್‌ಗಳನ್ನು ಎಪಿಎಂಸಿ ಮೂಲಕ ಸ್ಥಾಪಿಸಲು 2024-25 ನೇ ಸಾಲಿನ ಆಯ-ವ್ಯಯದಲ್ಲಿ ಘೋಷಿಸಲಾಗಿರುತ್ತದೆ. ಈ ಸಂಬಂಧ ಕೃಷಿ ಮಾರುಕಟ್ಟೆ ಇಲಾಖಾವತಿಯಿಂದ ಕ್ರಮವನ್ನು ಜರುಗಿಸಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ ಸಿಓ/145/ಎಂ.ಆರ್.ಇ/2024 ದಿನಾಂಕ:10.12.2024 ರನ್ವಯ ಸಕ್ಕರೆ ಕಾರ್ಖಾನೆಗಳ ಬಳಿ ವೇ-ಬ್ರಿಡ್ಜ್‌ಗಳನ್ನು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಮೂಲಕ ಸ್ಥಾಪಿಸಲು ಪ್ರಥಮ ಹಂತದಲ್ಲಿ 13 ಎ.ಪಿ.ಎಂಸಿ ಗಳಲ್ಲಿ ಗುರುತಿಸಲಾದ 15 ಸ್ಥಳಗಳಲ್ಲಿ ಡಿಜಿಟಲ್ ಮತ್ತು ಟ್ಯಾಂಪರಿಂಗ್ ಪ್ರೂಫ್ ವೇ-ಬ್ರಿಡ್ಜ್ ಗಳನ್ನು ಸ್ಥಾಪಿಸಿ ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. |

**ಸಂಖ್ಯೆ :** ಸಿಐ 25 ಎಸ್‌ಜಿಎಫ್ 2025

(ಶಿವಾನಂದ ಎಸ್ ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು